" ELECTION URGENT "

सत्यमेव जयते

**ರಾಜ್ಯ ಚುನಾವಣಾ ಆಯೋಗ, ಕರ್ನಾಟಕ**

ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಂಡಳಿ ಕಟ್ಟಡ (ಹಿಂಭಾಗ), 1ನೇ ಮಹಡಿ,
ನಂ.8, ಕನ್ನಿಂಗ್ ಹ್ಯಾಂ ರಸ್ತೆ, ಬೆಂಗಳೂರು-52.

ರಾಜ್ಯ ಚುನಾವಣಾ ಆಯೋಗವು ಕರ್ನಾಟಕ ಪೌರಸಭೆಗಳ (ಕೌನ್ಸಿಲರುಗಳ ಚುನಾವಣೆ) ನಿಯಮಗಳು, 1977ರ ನಿಯಮ 3(1) ರಲ್ಲಿ ರಾಜ್ಯ ಚುನಾವಣಾ ಆಯೋಗಕ್ಕೆ ದತ್ತವಾಗಿರುವ ಅಧಿಕಾರದ ಮೇರೆಗೆ ಆದೇಶ ಸಂಖ್ಯೆ: ರಾಚುಆ:30:ಇಯುಬಿ:2018, ದಿನಾಂಕ: 02.08.2018 ರಂದು ರಾಜ್ಯದ 105 ನಗರ ಸ್ಥಳೀಯ ಸಂಸ್ಥೆಗಳಿಗೆ ಚುನಾವಣಾ ವೇಳಾಪಟ್ಟಿಯನ್ನು ಪ್ರಕಟಿಸಿ ಚುನಾವಣೆ ನಡೆಸಲು ಆದೇಶಿಸಲಾಗಿತ್ತು ಹಾಗೂ ದಿನಾಂಕ: 09.08.2018ರ ತಿದ್ದುಪಡಿ ಆದೇಶದಂತೆ ಮತಗಳ ಎಣಿಕೆಯನ್ನು ದಿನಾಂಕ: 03.09.2018 (ಸೋಮವಾರ) ರಂದು ನಡೆಸಲು ಆದೇಶಿಸಲಾಗಿತ್ತು.

ಭಾರತದ ಮಾಜಿ ಪ್ರಧಾನಿಗಳಾದ ಶ್ರೀ ಅಟಲ್ ಬಿಹಾರಿ ವಾಜಪೇಯಿ ರವರು ಇಂದು ದಿನಾಂಕ: 16.08.2018 ರಂದು ನಿಧನರಾಗಿರುವುದರಿಂದ, ಸರ್ಕಾರವು Negotiable Instruments Act, 1881 ಅಡಿಯಲ್ಲಿ ದಿನಾಂಕ: 17.08.2018 ರಂದು ಸಾರ್ವಜನಿಕ ರಜೆಯನ್ನು ಘೋಷಿಸಿದೆ.

ಕರ್ನಾಟಕ ಪೌರಸಭೆಗಳ (ಕೌನ್ಸಿಲರುಗಳ ಚುನಾವಣೆ) ನಿಯಮಗಳು, 1977ರ ನಿಯಮ 8 (2) (ಎ) ರಂತೆ ನಾಮಪತ್ರ ಸಲ್ಲಿಸಲು ಕೊನೆಯ ದಿನಾಂಕ ಸಾರ್ವಜನಿಕ ರಜಾ ದಿನವಾಗಿದ್ದಲ್ಲಿ ಆ ತರುವಾಯದ ಸಾರ್ವಜನಿಕ ರಜಾ ದಿನ ಅಲ್ಲದ ಮುಂಬರುವ ದಿನವನ್ನು ನಿಗದಿಪಡಿಸಬೇಕಾಗಿರುತ್ತದೆ.

ಆಯೋಗದ ದಿನಾಂಕ: 02.08.2018ರ ಆದೇಶದಂತೆ, ಚುನಾವಣಾ ಪ್ರಕ್ರಿಯೆ ದಿನಾಂಕ: 10.08.2018 ರಿಂದ ಪ್ರಾರಂಭವಾಗಿದ್ದು ದಿನಾಂಕ: 17.08.2018 ರಂದು ನಾಮಪತ್ರ ಸಲ್ಲಿಸಲು ಕೊನೆಯ ದಿನವಾಗಿರುತ್ತದೆ. ಮೇಲ್ಕಂಡ ಸನ್ನಿವೇಶದ ಹಿನ್ನಲೆಯಲ್ಲಿ, ಚುನಾವಣಾ ವೇಳಾಪಟ್ಟಿಯನ್ನು ಪರಿಷ್ಕರಿಸುವುದು ಅವಶ್ಯವಾಗಿರುತ್ತದೆ. ಆದುದರಿಂದ ಈ ಆದೇಶ:

**ರಾಜ್ಯ ಚುನಾವಣಾ ಆಯೋಗದ ತಿದ್ದುಪಡಿ ಆದೇಶ ಸಂಖ್ಯೆ: ರಾಚುಆ.30.ಇಯುಬಿ.2018,**

**ಬೆಂಗಳೂರು, ದಿನಾಂಕ: 16-08-2018**

ರಾಜ್ಯ ಚುನಾವಣಾ ಆಯೋಗವು ಕರ್ನಾಟಕ ಪೌರಸಭೆಗಳ (ಕೌನ್ಸಿಲರುಗಳ ಚುನಾವಣೆ) ನಿಯಮಗಳು 1977ರ ನಿಯಮ 3(1) ರಲ್ಲಿ ರಾಜ್ಯ ಚುನಾವಣಾ ಆಯೋಗಕ್ಕೆ ದತ್ತವಾಗಿರುವ ಅಧಿಕಾರದ

ಮೇರೆಗೆ ಈ ಕೆಳಕಂಡಂತೆ ಚುನಾವಣಾ ವೇಳಾಪಟ್ಟಿಯನ್ನು ಪರಿಷ್ಕರಿಸಿ ಅದರಂತೆ ಚುನಾವಣೆ ನಡೆಸಲು ಆದೇಶಿಸಿದೆ.

**ಚುನಾವಣಾ ವೇಳಾ ಪಟ್ಟಿ**

ದಿನಾಂಕ: 10.08.2018 ರಿಂದ ದಿನಾಂಕ: 16.08.2018ರ ವರೆಗಿನ ಚುನಾವಣಾ ಪ್ರಕ್ರಿಯೆಗಳಿಗೆ ಯಾವುದೇ ಬಾದಕವಿರುವುದಿಲ್ಲ.

| | | |
|---|---|---|
| 1 | ನಾಮಪತ್ರಗಳನ್ನು ಸಲ್ಲಿಸಲು ಕೊನೆಯ ದಿನಾಂಕ ಮತ್ತು ದಿನ | 18–08–2018 (ಶನಿವಾರ) |
| 2 | ನಾಮಪತ್ರಗಳನ್ನು ಪರಿಶೀಲಿಸುವ ದಿನಾಂಕ ಮತ್ತು ದಿನ | 20–08–2018 (ಸೊಮವಾರ) |
| 3 | ಉಮೇದುವಾರಿಕೆಗಳನ್ನು ಹಿಂತೆಗೆದುಕೊಳ್ಳಲು ಕೊನೆಯ ದಿನಾಂಕ ಮತ್ತು ದಿನ | 23–08–2018 (ಗುರುವಾರ) |
| **4** | **ಮತದಾನ ಅವಶ್ಯವಿದ್ದರೆ, ಮತದಾನವನ್ನು ನಡೆಸಬೇಕಾದ ದಿನಾಂಕ ಮತ್ತು ದಿನ (ಸಮಯ ಬೆಳಿಗ್ಗೆ 7.00 ಗಂಟೆಯಿಂದ ಸಾಯಂಕಾಲ 5.00 ಗಂಟೆವರೆಗೆ)** | **31–08–2018 (ಶುಕ್ರವಾರ)** |
| 5 | ಮರು ಮತದಾನ ಇದ್ದಲ್ಲಿ ಮತದಾನ ನಡೆಸಬೇಕಾದ ದಿನಾಂಕ ಮತ್ತು ದಿನ (ಸಮಯ ಬೆಳಿಗ್ಗೆ 7.00 ಗಂಟೆಯಿಂದ ಸಾಯಂಕಾಲ 5.00 ಗಂಟೆವರೆಗೆ) | 02–09–2018 (ಭಾನುವಾರ) |
| 6 | ಮತಗಳ ಎಣಿಕೆಯ ದಿನಾಂಕ ಮತ್ತು ದಿನ (ಬೆಳಿಗ್ಗೆ 8.00 ಗಂಟೆಯಿಂದ) (ತಾಲ್ಲೂಕಿನ ಕೇಂದ್ರ ಸ್ಥಳದಲ್ಲಿ) | 03–09–2018 (ಸೋಮವಾರ) |
| 7 | ಚುನಾವಣೆಯನ್ನು ಯಾವ ದಿನಾಂಕಕ್ಕೆ ಮುಂಚೆ ಮುಕ್ತಾಯಗೊಳಿಸಬೇಕೋ ಆ ದಿನಾಂಕ ಮತ್ತು ದಿನ | 03–09–2018 (ಸೋಮವಾರ) |

ಉಳಿದಂತೆ ಯಾವುದೇ ಬದಲಾವಣೆ ಇರುವುದಿಲ್ಲ.

ಆದೇಶಾನುಸಾರ

ಅರ್ಚನ ಎಂ.ಎಸ್ 16/8/2018

(ಅರ್ಚನ ಎಂ.ಎಸ್)
ಅಧೀನ ಕಾರ್ಯದರ್ಶಿ,
ರಾಜ್ಯ ಚುನಾವಣಾ ಆಯೋಗ, ಕರ್ನಾಟಕ.

**ಇವರಿಗೆ:**

1. ಜಿಲ್ಲಾಧಿಕಾರಿಗಳು ಚಿತ್ರದುರ್ಗ, ದಾವಣಗೆರೆ, ತುಮಕೂರು, ಶಿವಮೊಗ್ಗ, ಮೈಸೂರು, ಚಾಮರಾಜನಗರ, ದಕ್ಷಿಣ ಕನ್ನಡ, ಉಡುಪಿ, ಹಾಸನ, ಮಂಡ್ಯ, ಕೊಡಗು, ಬೆಳಗಾವಿ, ವಿಜಯಪುರ, ಬಾಗಲಕೋಟೆ, ಗದಗ, ಹಾವೇರಿ, ಉತ್ತರ ಕನ್ನಡ, ಕಲಬುರಗಿ, ಕೊಪ್ಪಳ, ಬಳ್ಳಾರಿ, ರಾಯಚೂರು, ಬೀದರ್ ಮತ್ತು ಯಾದಗಿರಿ ಜಿಲ್ಲೆ.
2. ಸಂಬಂಧಪಟ್ಟ ಚುನಾವಣಾಧಿಕಾರಿಯವರಿಗೆ (ಜಿಲ್ಲಾಧಿಕಾರಿಗಳ ಮೂಲಕ).